**MVC.269/2022**

PW-1

ದಿನಾಂಕಃ **25.06.2025** ರಂದು ಸಾಕ್ಷಿಗೆ ಪ್ರಮಾಣವಚನ ಬೋಧಿಸಲಾಯಿತು.

ಮುಂದುವರಿದ ಪಾಟೀ ಸವಾಲುಃ 2 ನೇ ಎದುರುದಾರರ ಪರ ವಕೀಲರಿಂದಃ

ನಂಜಪ್ಪ ಆಸ್ಪತ್ರೆಯಲ್ಲಿ ನನಗೆ ಯಾವುದೇ ಶಸ್ತ್ರ ಚಿಕಿತ್ಸೆ ಮಾಡಿಲ್ಲ ಎಂದರೆ ಸರಿ. ಆಸ್ಪತ್ರೆಯಿಂದ ಬಿಡುಗಡೆ ಹೊಂದಿದ ನಂತರ ಪುನಃ ಚಿಕಿತ್ಸೆ ಪಡೆದುಕೊಂಡಿರುವುದನ್ನು ತೋರಿಸಲು ದಾಖಲೆ ಕೊಟ್ಟಿಲ್ಲ ಎಂದರೆ ಸರಿ. ನಾನು ಹಾಜರುಪಡಿಸಿರುವ ನಿಪಿ-7 ಮತ್ತು 19 ರ ಪ್ರಕಾರ ನನಗೆ ಸಣ್ಣ-ಪುಟ್ಟ ಗಾಯಗಳಾಗಿರುವ ಕಾರಣ ನಾನು ಪುನಃ ಚಿಕಿತ್ಸೆ ಪಡೆದುಕೊಳ್ಳಲು ಆಸ್ಪತ್ರೆಗೆ ಹೋಗಿಲ್ಲ ಎಂದರೆ ಸರಿಯಲ್ಲ. ಅಪಘಾತಕ್ಕಿಂತ ಪೂರ್ವದ ಹಾಗೆ ಈಗಲೂ ಕೂಡ ನಾನು ಆರೋಗ್ಯವಾಗಿದ್ದು, ನನಗೆ ಯಾವುದೇ ಶಾಶ್ವತ ಅಂಗನ್ಯೂನ್ಯತೆಗಳು ಆಗಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-23 ರ ದಾಖಲೆ ನನ್ನ ಹೆಸರಿನಲ್ಲಿ ಇಲ್ಲ ಎಂದರೆ ಸರಿ. ನನ್ನ ಆದಾಯವನ್ನು ತೋರಿಸಲು ಯಾವುದೇ ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. 1 ನೇ ಎದುರುದಾರರ ವಾಹನಕ್ಕೆ 2 ನೇ ಎದುರುದಾರ ಕಂಪನಿ ಯಾವುದೇ ಪಾಲಿಸಿ ಕೊಟ್ಟಿಲ್ಲ ಎಂದರೆ ಸರಿಯಲ್ಲ. 1 ಮತ್ತು 2 ನೇ ಎದುರುದಾರರ ನಡುವೆ ಯಾವುದೇ ವಿಮಾ ಒಪ್ಪಂದಗಳು ಇರದ ಕಾರಣ 1 ನೇ ಎದುರುದಾರರಿಗೆ ಅಥವಾ ನನಗೆ 2 ನೇ ಎದುರುದಾರರು ಯಾವುದೇ ವಿಮಾ ಪರಿಹಾರಣವನ್ನು ಕೊಡಲು ಬಾದ್ಯಸ್ಥರಿರುವುದಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಎ ಒ

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ
ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ.